# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎ.ಎಸ್.ಪ್ರಸನ್ನ, ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಇವರ ಪತ್ರ ಸಂಖ್ಯೆ: ಜಿ.ಪಂ.ಹಾ/ಪಶಾ/67/2016-17, ದಿನಾಂಕ:31.01.2018.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ161:ಗ್ರಾಪಂಅ:2018, ದಿನಾಂಕ:17.02.2018 ಮತ್ತು 03.03.2018ರ ಕಾರಣ ಕೇಳುವ ನೋಟಿಸ್.
3. ಶ್ರೀ ಎ.ಎಸ್.ಪ್ರಸನ್ನ, ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:12.03.2018.
4. ಇದೇ ಸಮಸಂಖ್ಯೆಯ ವಿಚಾರಣಾ ನೋಟೀಸಿನ ದಿನಾಂಕ: 22.03.2018, 01.12.2018, 29.08.2018 ಮತ್ತು 15.10.2018. ವಿಚಾರಣೆ ನಡೆದ ದಿನಾಂಕ: 06.04.2018, 01.09.2018 ಮತ್ತು 07.12.2018.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀ ಎ.ಎಸ್.ಪ್ರಸನ್ನ, ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ, ಇವರು ಗ್ರಾಮ ಪಂಚಾಯಿತಿಯಲ್ಲಿ ಬರಪರಿಸ್ಥಿತಿ ನಿಭಾಯಿಸಲು ದಿನಾಂಕ:01.02.2017 ರಿಂದ 26.05.2017ರವರೆಗೆ ಒಂದೇ ದಿನದಲ್ಲಿ 10 ರಿಂದ 16 ಟ್ಯಾಂಕರ್ ನೀರು ಸರಬರಾಜು ಮಾಡಿರುವುದಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ, ಒಟ್ಟು 252 ದಿನಗಳಲ್ಲಿ 693 ಟ್ಯಾಂಕರ್ ನೀರನ್ನು ಸ್ವಂತ ವಾಹನದಲ್ಲಿ ಪೂರೈಸಿದ್ದರ ಒಟ್ಟು ಮೊತ್ತ ರೂ.4,23,000/-ಗಳ ನಕಲಿ ಬಿಲ್ಲುಗಳನ್ನು ಸೃಷ್ಟಿಸಿ ಅವ್ಯವಹಾರ ಮಾಡಿ ಸರ್ಕಾರದ ಹಣ ದುರುಪಯೋಗ ಮಾಡಿರುತ್ತಾರೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43-ಎ ರಡಿ ಕ್ರಮವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟೀಸನ್ನು ದಿನಾಂಕ:17.02.2018 ಮತ್ತು 03.03.2018ರ ರಂದು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರು ಕಾರಣ ಕೇಳುವ ನೋಟೀಸಿಗೆ ಈ ಕೆಳಕಂಡಂತೆ ಉತ್ತರ ಸಲ್ಲಿಸಿರುತ್ತಾರೆ.

- ಸದರಿ ಪತ್ರದಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದತೆ ಉಪವಿಭಾಗಾಧಿಕಾರಿ, ಸಕಲೇಶಪುರ ಉಪವಿಭಾಗ, ಹಾಸನ ರವರು ವಿಚಾರಣೆಯನ್ನು ಅಕ್ಟೋಬರ್ 2017ರಲ್ಲಿ ನಡೆಸಿದ್ದು, ವಿಚಾರಣೆ ಸಮಯದಲ್ಲಿ ನನ್ನ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತೇನೆ. ಟ್ಯಾಂಕರ್ ಮೂಲಕ ಕುಡಿಯುವ ನೀರಿನ ಸರಬರಾಜು ಮಾಡಿರುವ ಬಗ್ಗೆ ಗ್ರಾಮ ಪಂಚಾಯಿತಿ ನಡವಳಿ, ಯಗತಿ ಗ್ರಾಮದ ಗ್ರಾಮಸ್ಥರ ಸಹಿ, ಬರಗಾಲ ನಿರ್ವಹಣೆಗೆ ಟ್ಯಾಂಕರ್ ಬಳಸಿದ ಬಗ್ಗೆ ಬಿಲ್ಲುಗಳನ್ನು ಸಲ್ಲಿಸಲಾಗಿದೆ.
- ಕುಡಿಯುವ ನೀರಿನ್ನು ಟ್ಯಾಂಕರ್ ಮೂಲಕ ಸರಬರಾಜು ಮಾಡುವ ಬಗ್ಗೆ ಗ್ರಾಮ ಸಭೆಯಲ್ಲಿ ಅನುಮೋದನೆ ಪಡೆದು, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಅರಕಲಗೂಡು ತಾಲ್ಲೂಕು ರವರಿಂದ ಅನುಮತಿ ಪಡೆಯಲಾಗಿದೆ. ಒಂದು ಟ್ಯಾಂಕರ್‌ಗೆ ರೀ.600/-ರಂತೆ ಕುಡಿಯುವ ನೀರನ್ನು ಸರಬರಾಜು ಮಾಡುವಂತೆ ನೋಟಿಸ್ ಬೋರ್ಡಿನಲ್ಲಿ ತಿಳಿಸಲಾಗಿರುತ್ತದೆ. ಆದರೆ ಈ ದರಪಟ್ಟಿಗೆ ಯಾರೂ ಸರಬರಾಜು ಮಾಡಲು ಬಾರದ ಕಾರಣ ನಾನು ಕುಡಿಯುವ ನೀರಿನ ತೀವ್ರ ಸಮಸ್ಯೆ ಇದ್ದುದರಿಂದ ನನ್ನ ಟ್ಯಾಂಕರ್ ಹಾಗೂ ಒಂದು ಬಾಡಿಗೆ ಟ್ಯಾಂಕರ್ ಮೂಲಕ ಸರಬರಾಜು ಮಾಡಿರುತ್ತೇನೆ. ಮಾನ್ಯ ಶಾಸಕರ ನೇತೃತ್ವದ ಟಾಸ್ಕ್ ಫೋರ್ಸ್ ಕಮಿಟಿಯಲ್ಲಿ ವರದಿ ಪಡೆದು ಸಂಬಂಧಿಸಿದ ಅಧಿಕಾರಿಗಳು ಬಿಲ್ಲುಗಳನ್ನು ಪಾವತಿಸಿರುತ್ತಾರೆ.

- ಉಪವಿಭಾಗಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡದೆ, ಗ್ರಾಮಸ್ಥರನ್ನು ವಿಚಾರಿಸದೆ ಏಕಪಕ್ಷೀಯವಾಗಿ ವರದಿಯನ್ನು ಸಲ್ಲಿಸಿರುತ್ತಾರೆ. ಬರಪರಿಸ್ಥಿತಿ ನಿರ್ವಹಣೆಗಾಗಿ ಅನುದಾನವನ್ನು ಜಿಲ್ಲಾಧಿಕಾರಿಯವರು ನೀಡಿರುತ್ತಾರೆ. ಸದರಿ ಅನುದಾನವು ಕಂದಾಯ ಇಲಾಖೆಯ ಅಧಿಸೂಚನೆಯಂತೆ ರಾಜ್ಯ ವಿಪತ್ತು ನಿರ್ವಹಣಾ ನಿಧಿಯಿಂದ ಮಂಜೂರಾಗಿರುತ್ತದೆ ಹೊರತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಆಗಿರುವುದಿಲ್ಲ. ಆದ್ದರಿಂದ ಬರಪರಿಸ್ಥಿತಿಯಲ್ಲಿ ಕುಡಿಯುವ ನೀರು ಸರಬರಾಜು ಮಾಡಿರುವ ಕಾಮಗಾರಿ ಗ್ರಾಮ ಪಂಚಾಯತಿಯ ಕಾಮಗಾರಿಯಾಗಿರುವುದಿಲ್ಲ. ಆದ್ದರಿಂದ ಕ.ಗ್ರಾಮತ್ತು ಪಂ.ರಾ.ಅಧಿನಿಯಮ 1993 ಪ್ರಕರಣ 43-ಎ ಅಡಿ ಸದಸ್ಯತ್ವ ರದ್ದು ಪಡಿಸಲು ಆಸ್ಪದವಿರುವುದಿಲ್ಲ. ಈ ಪ್ರಕರಣದಡಿ ಸದಸ್ಯತ್ವ ರದ್ದು ಪಡಿಸುವುದನ್ನು ರಾಜ್ಯ ಚುನಾವಣಾ ಆಯೋಗ ನಿರ್ಣಯಿಸಬೇಕೆ ಹೊರತು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಾಗಲೀ ಅಥವಾ ಉಪವಿಭಾಗಾಧಿಕಾರಿಗಳು ಮಾಡುವ ಅಧಿಕಾರ ಇರುವುದಿಲ್ಲ.
- ಉಪವಿಭಾಗಾಧಿಕಾರಿಗಳು ತಮ್ಮ ವರದಿಯಲ್ಲಿ ಒಂದು ಟ್ಯಾಂಕರ್ ಭರ್ತಿ ಮಾಡಲು 2-30 ರಿಂದ 3-00 ಗಂಟೆಗಳ ಕಾಲ ಬೇಕಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಇದಕ್ಕೆ ಆದಾರ ಇರುವುದಿಲ್ಲ. ನಾನು 1 ದಿನಕ್ಕೆ 6-7 ಬಾರಿ ನೀರಿನ ಮೂಲದಿಂದ 2 ಕಿ.ಮಿ ಇರುವ ಗ್ರಾಮಕ್ಕೆ ನೀರು ಸರಬರಾಜು ಮಾಡಿರುತ್ತೇನೆ. 1 ಗಂಟೆಗೆ 1 ಟ್ಯಾಂಕರ್ ನೀರು ಸರಬರಾಜು ಮಾಡಿರುತ್ತೇನೆ, ನಾನು ಸಲ್ಲಿಸಿರುವ ಬಿಲ್ಲುಗಳಲ್ಲಿ ದಿನಕ್ಕೆ 6-7 ಟ್ಯಾಂಕರ್ ನೀರು ಸರಬರಾಜು ಮಾಡಿರುವುದಾಗಿ ದಾಖಲಾಗಿರುತ್ತದೆ. ಆದರೆ ಉಪವಿಭಾಗಾಧಿಕಾರಿಗಳು ತಮ್ಮ ವರದಿಯಲ್ಲಿ ದಿನಕ್ಕೆ 16 ಟ್ಯಾಂಕರ್ ಎಂದು ಸುಳ್ಳು ವರದಿ ಸಲ್ಲಿಸಿರುತ್ತಾರೆ. ನನ್ನ ವಿರುದ್ಧ ರಾಜಕೀಯ ದುರುದ್ದೇಶದಿಂದ ದೂರು ಸಲ್ಲಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲ್ಪಾದ ಕ್ರಮ ಸಂಖ್ಯೆ (4) ರಲ್ಲಿ ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:06.04.2018 ರಂದು ನಡೆದ ವಿಚಾರಣೆಯಲ್ಲಿ ಆದೇಶಕ್ಕಾಗಿ ಮುಂದೂಡಿದ್ದು, ಲಿಖಿತ ವಾದ ಸಲ್ಲಿಸಲು 15 ದಿನ ಕಾಲಾವಕಾಶ ನೀಡಲಾಗಿರುತ್ತದೆ. ದಿನಾಂಕ:01.09.2018 ರಂದು ಮಾನ್ಯ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ನಡೆದ ವಿಚಾರಣೆಯಲ್ಲಿ ಶ್ರೀ ಪ್ರಸನ್ನ ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ ರವರು ಈಗಾಗಲೇ ಆಪಾದನೆಗಳಿಗೆ ಲಿಖಿತ ರೂಪದಲ್ಲಿ ಉತ್ತರ ಸಲ್ಲಿಸಿರುವುದಾಗಿ ಹಾಗೂ ಟ್ಯಾಂಕರ್ ಮುಖಾಂತರ ನೀರು ಸರಬರಾಜು ಮಾಡಿರುವ ಬಿಲ್ಲಿನ ಹಣವನ್ನು ಜಿಲ್ಲಾ ಪಂಚಾಯಿತಿ ಮುಖಾಂತರ ತೆಗೆದುಕೊಂಡಿರುವುದಾಗಿ ಗ್ರಾಮ ಪಂಚಾಯಿತಿ ಹಣವನ್ನು ಈ ಕೆಲಸಕ್ಕೆ ಬಳಸಿಕೊಂಡಿರುವುದಿಲ್ಲವೆಂದು ಹಾಗೂ ಈ ಪ್ರಕರಣವು ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದ ವ್ಯಾಪ್ತಿಗೆ ಒಳಪಡುವುದಿಲ್ಲವೆಂದು ತಿಳಿಸಿರುತ್ತಾರೆ. ಮುಂದಿನ ವಿಚಾರಣೆಯನ್ನು ದಿನಾಂಕ:26.10.2018 ರಂದು ಮುಂದೂಡಲಾಯಿತು. ದಿನಾಂಕ:07.12.2018 ರಂದು ನಡೆದ ವಿಚಾರಣೆಯಲ್ಲಿ ಅಧ್ಯಕ್ಷರ ಪರವಾಗಿ ಹಾಜರಿದ್ದ ವಕೀಲರು ಬರ ಪರಿಸ್ಥಿತಿ ನಿಬಾಯಿಸಲು ಅಧ್ಯಕ್ಷರು ದಿನಕ್ಕೆ 10 ಟ್ರಿಪ್ ನೀರು ಸರಬರಾಜು ಮಾಡಿದ್ದು, ಸರಬರಾಜು ಬಿಲ್ಲನ್ನು ಜಿಲ್ಲಾಧಿಕಾರಿಯವರ ನಿಧಿಯಿಂದ ಪಡೆದಿರುವುದರಿಂದ ಗ್ರಾಮ ಪಂಚಾಯಿತಿಯ ಹಣ ದುರುಪಯೋಗವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಅರಕಲಗೂಡು ರವರು ಹಾಜರಿದ್ದು, ಜಿಲ್ಲಾಧಿಕಾರಿಯವರ ನಿಧಿಯಿಂದ ಹಣ ಪಾವತಿಸಿರುವುದು ಖಚಿತಪಡಿಸಿರುತ್ತಾರೆ. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ ರವರು ಜಿಲ್ಲಾಧಿಕಾರಿಯವರ ನಿಧಿಯಿಂದ ಹಣ ಪಡೆದಿದ್ದರೂ ಕೂಡ ಅಧ್ಯಕ್ಷರು ಈ ರೀತಿ ಛಾರ್ಯ ಮಾಡಿರುವುದು ಮಾದರಿಯಲ್ಲವೆಂದು ತಿಳಿಸಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43-ಎ (1)(i) ರನ್ವಯ ಆತನು ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆ ಅಥವಾ ತಲೆ ತಗ್ಗಿಸುವಂಥಹ ನಡತೆಯ ತಪ್ಪಿತಸ್ಥನಾಗಿರುತ್ತಾನೆ. 43-ಎ (1)(v) ರನ್ವಯ ಪಂಚಾಯತ್‌ನ ಯಾವುದೇ ಬೇರೆ ರೀತಿಯ ಕಾಮಗಾರಿಯನ್ನು ಕಾರ್ಯಗತಗೊಳಿಸುವಾಗ, ಕರಾರು ಸಂಬಂಧದ ಅಥವಾ ಕಾಮಗಾರಿಗೆ ಸಂಬಂಧಿಸಿದ ಯಾವುದೇ ವ್ಯವಹಾರದಲ್ಲಿ ಹತ್ತಿರದ ಸಂಬಂಧಿಯಾಗಿರುವ ಯಾವೊಬ್ಬ ವ್ಯಕ್ತಿಯೊಂದಿಗೆ ಪ್ರತ್ಯಕ್ಷವಾಗಿ ತೊಡಗಿರುವುದು ಕಂಡುಬಂದರೆ ಅಥವಾ ಪಾಲುದಾರನಂತೆ, ನೌಕರನಂತೆ ಅಥವಾ ಅಂಥ ಅನ್ಯಥಾ ಸಂಘಸಂಸ್ಥೆ ಮಂಡಳಿಯಲ್ಲಿ ಸದಸ್ಯನಂತೆ ಸಹಭಾಗಿಯಾಗಿರುವನೆಂದು ಕಂಡು ಬಂದರೆ, ಅವನಿಗೆ ಅಹವಾಲು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದೆಂದು ತಿಳಿಸಿದೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಮತ್ತು ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಹಣ ದುರುಪಯೋಗವಾಗಿರುವುದು ಖಚಿತವಾಗಿರುತ್ತದೆ. ಶ್ರೀ ಎ.ಎಸ್.ಪ್ರಸನ್ನ ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ರವರು ಗ್ರಾಮ ಪಂಚಾಯಿತಿಯಲ್ಲಿ ಬರಪರಿಸ್ಥಿತಿ ನಿಭಾಯಿಸಲು

ದಿನಾಂಕ:01.02.2017 ರಿಂದ 26.05.2017ರವರೆಗೆ ಒಂದೇ ದಿನದಲ್ಲಿ 10 ರಿಂದ 16 ಟ್ಯಾಂಕರ್ ನೀರು ಸರಬರಾಜು ಮಾಡಿರುವುದಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ, ಒಟ್ಟು 252 ದಿನಗಳಲ್ಲಿ 693 ಟ್ಯಾಂಕರ್ ನೀರನ್ನು ಸ್ವಂತ ವಾಹನದಲ್ಲಿ ಪೂರೈಸಿದ್ದರ ಒಟ್ಟು ಮೊತ್ತ ರೂ.4,23,000/-ಗಳ ನಕಲಿ ಬಿಲ್ಲುಗಳನ್ನು ಸೃಷ್ಟಿಸಿ ಅವ್ಯವಹಾರ ಮಾಡಿ ಸರ್ಕಾರದ ಹಣ ದುರುಪಯೋಗ ಮಾಡಿರುವುದು ಕಂಡುಬಂದಿರುವುದನ್ನು ಗಮನಿಸಿ, ಶ್ರೀ ಎ.ಎಸ್.ಪ್ರಸನ್ನ ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43-ಎ (1)(i), 43-ಎ (1)(v) ಮತ್ತು 48(4) ರನ್ವಯ ಯಲಗತವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನ ಮತ್ತು ಸದಸ್ಯ ಸ್ಥಾನದಿಂದ ತೆಗೆದು ಹಾಕಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 161 ಗ್ರಾಪಂಅ 2018,**
**ಬೆಂಗಳೂರು, ದಿನಾಂಕ:28.01.2019.**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಹಣ ದುರುಪಯೋಗವಾಗಿರುವುದು ಖಚಿತವಾಗಿರುತ್ತದೆ. ಶ್ರೀ ಎ.ಎಸ್.ಪ್ರಸನ್ನ ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ರವರು ಗ್ರಾಮ ಪಂಚಾಯಿತಿಯಲ್ಲಿ ಬರಪರಿಸ್ಥಿತಿ ನಿಭಾಯಿಸಲು ದಿನಾಂಕ:01.02.2017 ರಿಂದ 26.05.2017ರವರೆಗೆ ಒಂದೇ ದಿನದಲ್ಲಿ 10 ರಿಂದ 16 ಟ್ಯಾಂಕರ್ ನೀರು ಸರಬರಾಜು ಮಾಡಿರುವುದಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ, ಒಟ್ಟು 252 ದಿನಗಳಲ್ಲಿ 693 ಟ್ಯಾಂಕರ್ ನೀರನ್ನು ಸ್ವಂತ ವಾಹನದಲ್ಲಿ ಪೂರೈಸಿದ್ದರ ಒಟ್ಟು ಮೊತ್ತ ರೂ.4,23,000/-ಗಳ ನಕಲಿ ಬಿಲ್ಲುಗಳನ್ನು ಸೃಷ್ಟಿಸಿ ಅವ್ಯವಹಾರ ಮಾಡಿ ಸರ್ಕಾರದ ಹಣ ದುರುಪಯೋಗ ಮಾಡಿರುವುದು ಕಂಡುಬಂದಿರುವುದನ್ನು ಗಮನಿಸಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43-ಎ (1)(i), 43-ಎ (1)(v) ಮತ್ತು 48(4) ರನ್ವಯ ಶ್ರೀ ಎ.ಎಸ್.ಪ್ರಸನ್ನ, ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ ಇವರನ್ನು ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ, ಸದಸ್ಯತ್ವವನ್ನು ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್), 28/1/19
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಹಾಸನ ಜಿಲ್ಲಾ ಪಂಚಾಯಿತಿ, ಹಾಸನ ಜಿಲ್ಲೆ.
2) ಕಾರ್ಯನಿರ್ವಾಹಕಾಧಿಕಾರಿ, ಅರಕಲಗೂಡು ತಾಲ್ಲೂಕು ಪಂಚಾಯಿತಿ, ಹಾಸನ ಜಿಲ್ಲೆ.
3) ಶ್ರೀ ಎ.ಎಸ್.ಪ್ರಸನ್ನ, ಅಧ್ಯಕ್ಷರು, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ.
4) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಲಗತವಳ್ಳಿ ಗ್ರಾಮ ಪಂಚಾಯಿತಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ,
5) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.